# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2024 ದಿನಾಂಕ: 02-01-2024

ಪತ್ರಿಕಾ ಪ್ರಕಟಣೆ

ಕೆಸೆಟ್-2023 ಕ್ಕೆ – ಪ್ರವೇಶ ಪತ್ರ ಡೌನ್‌ಲೋಡ್ ಮಾಡಬಹುದು

ಕರ್ನಾಟಕ ರಾಜ್ಯದಲ್ಲಿ ಕೆ-ಸೆಟ್ (KSET) ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸಲು ರಾಜ್ಯ ಸರ್ಕಾರದಿಂದ ಆದೇಶಿಸಲಾಗಿರುವುದರಿಂದ ದಿನಾಂಕ 13-01-2024 ರಂದು ಈ ಕೆಳಗಿನ ವೇಳಾಪಟ್ಟಿಯಂತೆ ನಡೆಸಲಾಗುವುದು.

| ದಿನಾಂಕ: ದಿನ: | ಪತ್ರಿಕೆ: | ಸಮಯ: |
|---|---|---|
| 13-01-2024 ಶನಿವಾರ | ಪತ್ರಿಕೆ-1 | ಬೆಳಿಗ್ಗೆ 10.00 ರಿಂದ 11.00 |
| | ಪತ್ರಿಕೆ-2 | ಮ. 12.00 ರಿಂದ 2.00 |

ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿ ಪ್ರವೇಶ ಪತ್ರವನ್ನು ಮತ್ತು ಅಭ್ಯರ್ಥಿಗಳಿಗೆ ನೀಡಲಾಗಿರುವ ಸೂಚನೆಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಹಾಗು ಮಾರ್ಗದರ್ಶನಗಳನ್ನು / ಕಾರ್ಯವಿಧಾನಗಳನ್ನು ತಪ್ಪದೆ ಅನುಸರಿಸಲು ಸೂಚಿಸಿದೆ. ಪ್ರವೇಶ ಪತ್ರದಲ್ಲಿ ಮುದ್ರಿಸಿರುವ ಎಲ್ಲಾ ವಿವರಗಳನ್ನು ಪರಿಶೀಲಿಸಿ, ನಿಗದಿತ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ.

1. ನಿಗದಿತ ಸಮಯಕ್ಕಿಂತ ಒಂದು ಗಂಟೆಯ ಮೊದಲು ಪರೀಕ್ಷಾ ಕೇಂದ್ರವನ್ನು ತಲುಪಲು ಅಭ್ಯರ್ಥಿಗಳು ಮುನ್ನೆಚ್ಚರಿಕೆಯಿಂದ ವ್ಯವಸ್ಥೆಯನ್ನು ಮಾಡಿಕೊಳ್ಳುವುದು ಸೂಕ್ತ.
2. ನಿಗದಿಪಡಿಸಿರುವ ಪರೀಕ್ಷಾ ಕೇಂದ್ರವನ್ನು ಹೊರತುಪಡಿಸಿ ಬೇರೆ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಯನ್ನು ಬರೆಯಲು ಅಭ್ಯರ್ಥಿಗಳಿಗೆ ಅನುವು ಮಾಡಿಕೊಡುವುದಿಲ್ಲ. ಅಭ್ಯರ್ಥಿಯು ಕಡ್ಡಾಯವಾಗಿ ಪ್ರವೇಶ ಪತ್ರ ಮತ್ತು ಮಾನ್ಯತೆ ಇರುವ ಯಾವುದಾದರು ಒಂದು, ಗುರುತಿನ ಚೀಟಿಯನ್ನು ಪರೀಕ್ಷಾ ಕೇಂದ್ರಕ್ಕೆ ತೆಗೆದು ಕೊಂಡು ಹೋಗಬೇಕು.
3. *ಎರಡನೆ ಅವಧಿಯ ಪರೀಕ್ಷೆಯು ಮ.12.00 ರಿಂದ ಪ್ರಾರಂಭವಾಗುವುದರಿಂದ, ಅಭ್ಯರ್ಥಿಗಳನ್ನು ಮೊದಲನೆ ಅವಧಿ ಪರೀಕ್ಷೆ ಮುಗಿದ ನಂತರ ಕೇಂದ್ರದಿಂದ ಹೊರಗೆ ಹೋಗಲು ಅನುಮತಿಸಲಾಗುವುದಿಲ್ಲ.*
4. ಅಭ್ಯರ್ಥಿಯು ಓಎಂಆರ್ ಉತ್ತರ ಪತ್ರಿಕೆಯಲ್ಲಿ ನೊಂದಣಿ ಸಂಖ್ಯೆಯನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ಶೇಡ್ ಮಾಡಬೇಕು. ನಂತರ ಅಭ್ಯರ್ಥಿಯು ಪ್ರಶ್ನೆಪತ್ರಿಕೆಯ ವರ್ಷನ್ ಕೋಡ್ ಅನ್ನು ತಪ್ಪಿಲ್ಲದೆ ಬರೆದು ಸಂಬಂಧಿಸಿದ ವೃತ್ತಗಳನ್ನು ಶೇಡ್ ಮಾಡಬೇಕು.
5. ಲಿಪಿಕಾರರ ಸೇವೆಯನ್ನು ಪಡೆಯಲು, ಪ್ರಾಧಿಕಾರದ ಲಿಂಕ್‌ನಲ್ಲಿ ಲಿಪಿಕಾರರ ಮಾಹಿತಿಗಳನ್ನು ನೀಡಿರುವ ವಿಕಲಚೇತನ ಅಭ್ಯರ್ಥಿಗಳಿಗೆ ಲಿಪಿಕಾರರ ಮಾಹಿತಿಯನ್ನೂ ಸಹ ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ.

***ಅಭ್ಯರ್ಥಿಗಳ ಗಮನಕ್ಕೆ:*** ನೊಂದಣಿ ಸಂಖ್ಯೆ, ಕೇಂದ್ರ ಸಂಖ್ಯೆ ಮತ್ತು ವಿಷಯ ಸಂಕೇತವನ್ನು ತಪ್ಪಾಗಿ ಬರೆಯುವ ಅಭ್ಯರ್ಥಿಗಳ ಉತ್ತರ ಪತ್ರಿಕೆಯನ್ನು ಮೌಲ್ಯ ಮಾಪನ ಮಾಡುವುದಿಲ್ಲ. ಅಭ್ಯರ್ಥಿಗಳು ಓಎಂಆರ್ ನಲ್ಲಿನ ನಿಗದಿತ ಜಾಗದಲ್ಲಿ ಕಡ್ಡಾಯವಾಗಿ ಸಹಿ ಮಾಡಬೇಕು.

ಸಹಿ/- ಕಾರ್ಯನಿರ್ವಾಹಕ ನಿರ್ದೇಶಕರು